ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 558
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಧರ್ಮೇಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13.12.2018
ಉತ್ತರಿಸುವ ಸಚಿವರು : ಮಾನ್ಯ ಉನ್ನತ ಶಿಕ್ಷಣ ಸಚಿವರು

| ಪ್ರಶ್ನೆ | ಉತ್ತರ |
|---|---|
| ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಉನ್ನತ ಶಿಕ್ಷಣ ಇಲಾಖೆಯಿಂದ ಹೊಸದಾಗಿ ಮಂಜೂರಾದ ಪಾಲಿಟೆಕ್ನಿಕ್ ಹಾಗೂ ಪದವಿ ಕಾಲೇಜುಗಳು ಎಷ್ಟು; ಅವುಗಳು ಯಾವುವು; | ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವುದೇ ಪದವಿ ಕಾಲೇಜನ್ನು ಪ್ರಾರಂಭಿಸಿರುವುದಿಲ್ಲ.<br>2016-17 ರಿಂದ 2018-19 ನೇ ಸಾಲಿನ ವರೆಗಿನ ಮೂರು ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲ್ಲೂಕಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಸಲು ಮಂಜೂರಾತಿ ನೀಡಿ ಆದೇಶಿಸಿದೆ. |
| ಹಾಗಿದ್ದಲ್ಲಿ, ಹೊಸದಾಗಿ ಮಂಜೂರಾದ ಪಾಲಿಟೆಕ್ನಿಕ್ ಹಾಗೂ ಪದವಿ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; | ಹೊಸದಾಗಿ ಪದವಿ ಕಾಲೇಜು ಮಂಜೂರಾಗದಿರುವುದರಿಂದ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.<br>ದಿನಾಂಕ:24-03-2018ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್, ತರೀಕೆರೆ ಸಂಸ್ಥೆಯ ಮುಖ್ಯ ಕಟ್ಟಡ ನಿರ್ಮಾಣ ಕಾಮಗಾರಿಗೆ ರೂ.800.00 ಲಕ್ಷಗಳ ಅಂದಾಜು ಮೊತ್ತದ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಆದೇಶಿಸಿದೆ. |
| ಚಿಕ್ಕಮಗಳೂರು ಜಿಲ್ಲೆಯಲ್ಲಿ ಹೊಸದಾಗಿ ಮಂಜೂರಾದ ಪಾಲಿಟೆಕ್ನಿಕ್ ಹಾಗೂ ಪದವಿ ಕಾಲೇಜುಗಳಿಗೆ ಕಟ್ಟಡ ನಿರ್ಮಾಣ ಮಾಡಲು ಕಳೆದ ಮೂರು ವರ್ಷಗಳಿಂದ ಬಿಡುಗಡೆ ಮಾಡಲಾದ ಅನುದಾನ, ಖರ್ಚಾದ ಅನುದಾನ ಹಾಗೂ ಬಾಕಿ ಉಳಿದಿರುವ ಅನುದಾನದ ಪೂರ್ಣ ವಿವರಗಳನ್ನು ಕಾಲೇಜುವಾರು ಹಾಗೂ ಕಾಮಗಾರಿವಾರು ನೀಡುವುದು; | ಚಿಕ್ಕಮಗಳೂರು ಜಿಲ್ಲೆಯಲ್ಲಿ ಹೊಸದಾಗಿ ಯಾವುದೇ ಪದವಿ ಕಾಲೇಜು ಮಂಜೂರಾಗದೇ ಇರುವುದರಿಂದ ಕಟ್ಟಡ ನಿರ್ಮಾಣ ಮಾಡಲು ಹಾಗೂ ಅನುದಾನ ಬಿಡುಗಡೆ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ.<br>ಸರ್ಕಾರಿ ಪಾಲಿಟೆಕ್ನಿಕ್, ತರೀಕೆರೆ ಸಂಸ್ಥೆಯ ಮುಖ್ಯಕಟ್ಟಡ ನಿರ್ಮಾಣ ಕಾಮಗಾರಿಗೆ 2017-18 ನೇ ಸಾಲಿಗೆ ರೂ.410.00 ಲಕ್ಷ ಮತ್ತು 2018-19 ನೇ ಸಾಲಿಗೆ ರೂ.81.89 ಲಕ್ಷ ಹೀಗೆ ಒಟ್ಟು ರೂ.491.89 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಪ್ರಸ್ತುತ ಕಾಮಗಾರಿಗೆ ಟೆಂಡರ್ ಪ್ರಕ್ರಿಯೇ ಪೂರ್ಣಗೊಂಡಿದ್ದು, ಕಾಮಗಾರಿ ಯು ಪ್ರಾರಂಬಿಸಲಾಗುತ್ತಿದೆ. ಸದರಿ ಕಾಮಗಾರಿಗೆ ಬಾಕಿ ಅನುದಾನ ರೂ.308.11 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಬೇಕಿದ್ದು,ಕಾಮಗಾರಿಯ ಪ್ರಗತಿಯ ಆಧಾರದನ್ವಯ ಹಂತ ಹಂತವಾಗಿ ಬಿಡುಗಡೆ ಮಾಡಲಾಗುತ್ತಿದೆ. |
| ಚಿಕ್ಕಮಗಳೂರು ಜಿಲ್ಲೆಯಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡಗಳು ಇಲ್ಲದಿರುವುದು ನಿಜವೇ; ಹಾಗಿದ್ದಲ್ಲಿ ಅವುಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಅಗತ್ಯ ಅನುದಾನವನ್ನು ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡಲಾಗುವುದೇ? (ಮಾಹಿತಿ ನೀಡುವುದು) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಹಾಲಿ 14 ಸರ್ಕಾರಿ ಪದವಿ ಕಾಲೇಜುಗಳಿದ್ದು, ಅದರಲ್ಲಿ 13 ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿದ್ದು, 01 ಕಾಲೇಜಿಗೆ (ಚಿಕ್ಕಮಗಳೂರು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ) ಮಾತ್ರ ನಿವೇಶನ ಲಭ್ಯವಿಲ್ಲದ ಕಾರಣ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸಾಧ್ಯವಾಗಿಲ್ಲ. ಸ್ವಂತ ನಿವೇಶನ ದೊರೆತ ತಕ್ಷಣ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

(ಜಿ.ಟಿ.ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 168 ಹೆಚ್‌ಪಿಯು 2018